# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತನಾಲ್ಕನೆಯ ಅಧಿವೇಶನ

## ಕಾರ್ಯಕಲಾಪಗಳ ಪಟ್ಟಿ

**ಸೋಮವಾರ, ದಿನಾಂಕ:13ನೇ ಸೆಪ್ಟೆಂಬರ್, 2021**

**(ಸಮಯ: ಬೆಳಗ್ಗೆ: 11.00 ಗಂಟೆಗೆ)**

* * *

### 01. ಸಂತಾಪ ಸೂಚನೆಗಳು

### 02. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಒಂದನೆಯ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಒಂದನೆಯ ಪಟ್ಟಿ

### 03. ಕಾರ್ಯದರ್ಶಿಯವರ ವರದಿ

ಕಳೆದ ಅಧಿವೇಶನದಲ್ಲಿ ವರದಿಯನ್ನು ಒಪ್ಪಿಸಿದ ನಂತರ ರಾಷ್ಟ್ರಪತಿಯವರಿಂದ ಹಾಗೂ ರಾಜ್ಯಪಾಲರಿಂದ ಒಪ್ಪಿಗೆ ಪಡೆದ ವಿಧೇಯಕಗಳ ಪಟ್ಟಿಯನ್ನು ಕಾರ್ಯದರ್ಶಿಯವರು ಸಭೆಯಲ್ಲಿ ಮಂಡಿಸುವುದು.

### 04. ಗಮನ ಸೆಳೆಯುವ ಸೂಚನೆಗಳು

೦1. **ಶ್ರೀ ಯು.ಬಿ.ವೆಂಕಟೇಶ್** ಅವರು ಬೆಂಗಳೂರಿನ ಬಸವನಗುಡಿಯ ಶ್ರೀ ಗುರುರಾಘವೇಂದ್ರ ಸಹಕಾರ ಬ್ಯಾಂಕ್ ನಿಯಮಿತದಲ್ಲಿ ಘಟಿಸಿರುವ ವಂಚನೆ ಪ್ರಕರಣಕ್ಕೆ ಸಂಬಂಧಿಸಿದಂತೆ ಕೈಗೊಂಡಿರುವ ಕಾನೂನು ಕ್ರಮಗಳ ಬಗ್ಗೆ ಮಾನ್ಯ ಸಹಕಾರ ಸಚಿವರ ಗಮನ ಸೆಳೆಯುವುದು.

೦2. **ಶ್ರೀ ಎನ್. ಅಪ್ಪಾಜಿಗೌಡ ಮತ್ತು ಶ್ರೀ ಕೆ.ಎ. ತಿಪ್ಪೇಸ್ವಾಮಿ** ಅವರುಗಳು ಸರ್ಕಾರಿ ಮೂಕ ಮಕ್ಕಳ ಶಾಲೆಯ ವಿಕಲಚೇತನ ಶಿಕ್ಷಕರಿಗೆ ವಿಶೇಷ ವಿಲೀನಾತಿ ನಿಯಮಗಳನ್ನು ರೂಪಿಸಿ ನಿವೃತ್ತಿ ವೇತನ ನೀಡುವ ಬಗ್ಗೆ ಮಾನ್ಯ ಗಣಿ ಮತ್ತು ಭೂ ವಿಜ್ಞಾನ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರ ಗಮನ ಸೆಳೆಯುವುದು.

೦೩. **ಶ್ರೀ ಶಾಂತರಾಮ್ ಬುಡ್ನ** ಸಿದ್ದಿ ಅವರು ವನವಾಸಿ ಪ್ರದೇಶಗಳಲ್ಲಿ ವಾಸಿಸುತ್ತಿರುವ ಆದ್ಯತಾ ಪಡಿತರ ಚೀಟಿ ಫಲಾನುಭವಿಗಳಿಗೆ ಕೇವಲ ಒಂದು ಲೀಟರ್ ಸೀಮೆ ಎಣ್ಣೆಯನ್ನು ಮಾಸಿಕವಾಗಿ ವಿತರಿಸುತ್ತಿರುವುದರಿಂದ ಉಂಟಾಗಿರುವ ಸಮಸ್ಯೆಗಳ ಬಗ್ಗೆ ಮಾನ್ಯ ಅರಣ್ಯ, ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರ ಗಮನ ಸೆಳೆಯುವುದು.

## 05. ನಿಯಮ 330ರ ಮೇರೆಗೆ

೦1. **ಶ್ರೀ ಕೆ.ಟಿ ಶ್ರೀಕಂಠೇಗೌಡ** ಅವರು ಮಂಡ್ಯ ಮೈಷುಗರ್ ಸಕ್ಕರೆ ಕಾರ್ಖಾನೆಯನ್ನು ಖಾಸಗಿ ಕಂಪನಿಯವರಿಗೆ ಗುತ್ತಿಗೆ ನೀಡದೆ ಸರ್ಕಾರಿ ಸ್ವಾಮ್ಯದಲ್ಲಿಯೇ ಉಳಿಸಿಕೊಂಡು ಪುನರ್ ಪ್ರಾರಂಭಿಸುವ ವಿಷಯದ ಕುರಿತು ಪ್ರಸ್ತಾಪಿಸುವುದು.

೦2. **ಶ್ರೀ ಪುಟ್ಟಣ್ಣ** ಅವರು ಸರ್.ಎಂ. ವಿಶ್ವೇಶ್ವರಯ್ಯ 2ನೇ ಹಂತ ಬಡಾವಣೆ ರಚನೆಗಾಗಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದವರು ಬೆಂಗಳೂರು ಉತ್ತರ ತಾಲ್ಲೂಕಿನ ಯಶವಂತಪುರ ಹೋಬಳಿಯ ಉಲ್ಲಾಳ ಗ್ರಾಮದಲ್ಲಿ ವಶಪಡಿಸಿಕೊಂಡಿರುವ ಜಮೀನುಗಳ ಭೂ ಮಾಲೀಕರಿಗೆ ಪರಿಹಾರ ನೀಡದಿರುವ ವಿಷಯದ ಕುರಿತು ಪ್ರಸ್ತಾಪಿಸುವುದು.

೦3. **ಶ್ರೀ ಆರ್.ಬಿ. ತಿಮ್ಮಾಪೂರ** ಅವರು ಬಾಗಲಕೋಟೆ ಜಿಲ್ಲೆ ಮುಧೋಳ ತಾಲ್ಲೂಕಿನ ಮೂಲಕ ಹಾಯ್ದುಹೋಗುವ ಘಟಪ್ರಭಾ ನದಿಯ ಪ್ರವಾಹದಿಂದಾಗಿ ಸಾರ್ವಜನಿಕರ ಆಸ್ತಿಪಾಸ್ತಿಗಳಿಗೆ ಹಾನಿಯಾಗಿದ್ದು, ಸೂಕ್ತ ಪರಿಹಾರ ಕ್ರಮಕೈಗೊಳ್ಳುವ ಕುರಿತು ಪ್ರಸ್ತಾಪಿಸುವುದು.

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**

**www.kla.kar.nic.in/council/council.htm**